ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 623 ಗ್ರಾಪಂಅ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:20-07-2019.

## ಸುತ್ತೋಲೆ

ವಿಷಯ: ರೋಟಾವೈರಸ್ ಲಸಿಕೆಯನ್ನು ರಾಜ್ಯದಲ್ಲಿ ಪ್ರಾರಂಭಿಸುವ ಕಾರ್ಯಕ್ರಮದಲ್ಲಿ ಜಿಲ್ಲಾ/ ತಾಲ್ಲೂಕು/ ಗ್ರಾಮ ಪಂಚಾಯತಿಗಳ ಸಹಭಾಗಿತ್ವದ ಬಗ್ಗೆ.

ಉಲ್ಲೇಖ: ಸರ್ಕಾರದ ಮಾನ್ಯ ಮುಖ್ಯಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ಅಧ್ಯಕ್ಷತೆಯಲ್ಲಿ ದಿನಾಂಕ:18-07-2019 ರಂದು ನಡೆದ ಸಭೆಯ ನಡವಳಿಗಳು.

*****

ರೋಟಾವೈರಸ್‌ನಿಂದ ಉಂಟಾಗುವ ಅತಿಸಾರ ಭೇದಿಯ ವಿರುದ್ಧ ರಕ್ಷಣೆ ನೀಡುವ ಸಲುವಾಗಿ ಕರ್ನಾಟಕ ರಾಜ್ಯದಲ್ಲಿ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದಡಿ ರೋಟಾವೈರಸ್ ಲಸಿಕೆಯನ್ನು ಪರಿಚಯಿಸುವ ಬಗ್ಗೆ ಚರ್ಚಿಸಲು ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು ರವರ ಅಧ್ಯಕ್ಷತೆಯಲ್ಲಿ ನಡೆದ ಉಲ್ಲೇಖಿತ ಸಭೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸಂಬಂಧಪಟ್ಟಂತೆ ಕೆಳಕಂಡ ಕ್ರಮಗಳನ್ನು ತೆಗೆದುಕೊಳ್ಳಲು ತಿಳಿಸಿರುತ್ತಾರೆ.

1. ಸಮುದಾಯ ಸಭೆಗಳನ್ನು ನಡೆಸಿ ರೋಟಾವೈರಸ್ ಮತ್ತು ಪರಿಷ್ಕೃತ ಲಸಿಕಾ ವೇಳಾಪಟ್ಟಿಯ ಪ್ರಾಮುಖ್ಯತೆಯ ಬಗ್ಗೆ ಅರಿವು ಮೂಡಿಸುವುದು.
2. ಆ ಪ್ರದೇಶಗಳಲ್ಲಿ ಸಕ್ರಿಯ ಸಂಪರ್ಕ ತಂತ್ರಗಳನ್ನು ಅಳವಡಿಸುವುದು.
3. ಲಸಿಕೆ ನಿರಾಕರಿಸುವ ಕುಟುಂಬಗಳನ್ನು ಮನವೊಲಿಸುವುದಕ್ಕೆ ಆರೋಗ್ಯ ಇಲಾಖೆಯೊಡನೆ ಜೊತೆಗೂಡಿ ಬೆಂಬಲ ನೀಡುವುದು.
4. ಎಲ್ಲಾ ಪ್ರದೇಶಗಳಲ್ಲಿ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದ ಚಟುವಟಿಕೆಗಳ ಬಗ್ಗೆ ಗ್ರಾಮ ಸಭೆ, ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿ ಸಭೆಗಳಲ್ಲಿ ಪರಿಶೀಲನೆ ಮಾಡುವುದು.
5. ಗ್ರಾಮ ಆರೋಗ್ಯ ನೈರ್ಮಲ್ಯ ಮತ್ತು ಪೌಷ್ಟಿಕಾಂಶ ಸಮಿತಿ (ವಿ.ಹೆಚ್.ಎಸ್.ಎನ್.ಸಿ) ಗಳ ಸಭೆಯು ನಿರಂತರವಾಗಿ ನಡೆಸುವುದು.
6. ಆರೋಗ್ಯ ಇಲಾಖೆಯ ವತಿಯಿಂದ ಹೊರಡಿಸಿರುವ ಜಾಹೀರಾತು ಟಿಪ್ಪಣಿಗಳನ್ನು ಪಂಚತಂತ್ರದಲ್ಲಿ ಅಳವಡಿಸಲು ತಿಳಿಸಲಾಯಿತು.
7. ಕಾರ್ಯಕ್ರಮಕ್ಕೆ ಸಂಬಂಧಪಟ್ಟ ವಿವರಗಳು ಆಗ್ಗಿಂದಾಗೆ ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ವಾಟ್ಸ್ ಆಪ್ ಗ್ರೂಪ್‌ಗಳಲ್ಲಿ ಕಳುಹಿಸಲು ಕ್ರಮವಹಿಸುವುದು.
8. ಬಾಲ ವಿಕಾಸ, ಗ್ರಾಮ ನೀರು ಸರಬರಾಜು ಮತ್ತು ಸ್ವಚ್ಛತಾ ಸಮಿತಿ ಹಾಗೂ ಆರೋಗ್ಯ, ನೈರ್ಮಲ್ಯ ಮತ್ತು ಪೌಷ್ಟಿಕಾಂಶ ಸಮಿತಿಗಳ ಜಂಟಿ ಸಭೆಯನ್ನು ಪ್ರತಿ ಮೂರನೇ ಶನಿವಾರ ನಡೆಸುವುದು.

ಮೇಲ್ಕಂಡ ಸೂಚನೆಗಳ ಬಗ್ಗೆ ಎಲ್ಲಾ ಜಿಲ್ಲಾ/ ತಾಲ್ಲೂಕು/ ಗ್ರಾಮ ಪಂಚಾಯಿತಿ ಅಧಿಕಾರಿಗಳು ಆರೋಗ್ಯ ಇಲಾಖೆಯ ಸಹಭಾಗಿತ್ವದೊಂದಿಗೆ ಅಗತ್ಯ ಕ್ರಮವಹಿಸಲು ಸೂಚಿಸಲಾಗಿದೆ.

(ಎಲ್.ಕೆ.ಅತೀಕ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

<u>ಇವರಿಗೆ:</u>

1. ಮಾನ್ಯ ಸರ್ಕಾರದ ಮುಖ್ಯಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.

<u>ಮಾಹಿತಿಗಾಗಿ:</u>

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ವಾರ್ತಾ ಮತ್ತು ಪ್ರವಾಸೋದ್ಯಮ ಮತ್ತು ಯುವಜನ ಸೇವಾ ಇಲಾಖೆ
3. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
4. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.

<u>ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:</u>

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು,
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು,
4. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.